ಸದನದಲ್ಲಿ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಶುಕ್ರವಾರ, ದಿನಾಂಕ: 11ನೇ ಡಿಸೆಂಬರ್, 2020

ಸಾರಿಗೆ ಇಲಾಖೆ ನೌಕರರಿಗೆ ಸರಿಯಾಗಿ ವೇತನ ಪಾವತಿಯಾಗದಿರುವ ಕುರಿತು

ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) -

72(517+391+537) ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ರಾಜ್ಯದಲ್ಲಿ ಕೋವಿಡ್-19 ರ ಲಾಕ್‌ಡೌನ್ ಪರಿಣಾಮ ಸಾರಿಗೆ ಸಂಸ್ಥೆಗಳ ಆದಾಯ ಕುಗ್ಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ಸಂಸ್ಥೆವಾರು ಹಾಗೂ ವಿಭಾಗವಾರು ಮಾಹಿತಿ ನೀಡುವುದು)

(ಆ) ಬಂದಿದ್ದಲ್ಲಿ, ಕೆ.ಎಸ್.ಆರ್.ಟಿ.ಸಿ ಮತ್ತು ಬಿ.ಎಂ.ಟಿ.ಸಿ ಸಂಸ್ಥೆಗಳ ನೌಕರರಿಗೆ ವೇತನ ಪಾವತಿಸಲು ಬಿಡುಗಡೆ ಮಾಡಲಾದ ಹಣವೆಷ್ಟು;

(ಇ) ಹಬ್ಬಗಳ ಸಂದರ್ಭಗಳಲ್ಲೂ ನೌಕರರಿಗೆ ವೇತನ ಪಾವತಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಎಷ್ಟು ತಿಂಗಳುಗಳಿಂದ ಸದರಿ ನೌಕರರಿಗೆ ವೇತನ ಪಾವತಿಸದೆ ಬಾಕಿ ಉಳಿಸಿಕೊಳ್ಳಲಾಗಿದೆ; ವೇತನ ಪಾವತಿಗೆ ಅಗತ್ಯವಿರುವ ಹಣವೆಷ್ಟು; ಶೀಘ್ರ ವೇತನ ಪಾವತಿಗೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಈ) ಈ ಸಂಸ್ಥೆಗಳ ಆದಾಯ ವೃದ್ಧಿಗೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಉ) ಸಾರಿಗೆ ಇಲಾಖೆಯ ಪ್ರಮುಖ ಸೇವೆಗಳಾದ ವಾಹನದ ಮಾಲೀಕತ್ವ ವರ್ಗಾವಣೆ, ಸರಕು ಸಾಗಣೆ ಪರವಾನಗಿ, ಫಿಟನೆಸ್ ಪ್ರಮಾಣ ಪತ್ರ ನೀಡುವಿಕೆ ಆನ್‌ಲೈನ್ ಪ್ರಕ್ರಿಯೆ ಜಾರಿಯಾಗಿದೆಯೇ;

(ಊ) ಜಾರಿಯಾಗಿದ್ದರೇ, ಈ ಸೇವೆಗಳ ಆನ್‌ಲೈನ್ ಅರ್ಜಿಗಳ ವಿಲೇವಾರಿ ಪ್ರಕ್ರಿಯೆ ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿದೆಯೇ ? (ಮಾಹಿತಿ ನೀಡುವುದು)